# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ

ದಿನಾಂಕ : DATE 12/3/2020

**ಸ್ಟೇಟ್ ನ್ಯೂಸ್**

### ಶಾಸಕರ ಭವನಕ್ಕೆ ಮಾಧ್ಯಮ ನಿರ್ಬಂಧ ತೆರವು

**ಬೆಂಗಳೂರು:** ಶಾಸಕರ ಭವನಕ್ಕೆ ಮಾಧ್ಯಮ ಪ್ರತಿನಿಧಿಗಳ ಪ್ರವೇಶ ನಿಷೇಧಿಸಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಹೊರಡಿಸಿದ್ದ ಆದೇಶಕ್ಕೆ ವ್ಯಾಪಕ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ನಿರ್ಬಂಧ ತೆರವುಗೊಳಿಸಿದ್ದಾರೆ. ವೃತ್ತಿಪರ ಕೆಲಸದ ಸಂಬಂಧ ಶಾಸಕರ ಜತೆ ಸಮಾಲೋಚನೆ ನಡೆಸಲು ಶಾಸಕರ ಭವನದಲ್ಲಿ ಮಾಧ್ಯಮ ಪ್ರತಿನಿಧಿಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸಬೇಕೆಂದು ಸ್ಪೀಕರ್ ಅವರು ಬುಧವಾರ ಸಂಜೆ ಭದ್ರತಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಇದರೊಂದಿಗೆ ತಾವೇ ಹೊರಡಿಸಿದ್ದ ಆದೇಶವನ್ನು ಸ್ಪೀಕರ್ ವಾಪಸ್ ಪಡೆದಿದ್ದಾರೆ. ಆದರೆ, ವಿಧಾನಸಭೆಯ ಒಳಗಡೆ ಎಲೆಕ್ಟ್ರಾನಿಕ್ ಮಾಧ್ಯಮದ ಕ್ಯಾಮೆರಾಮನ್‌ಗಳು ಹಾಗೂ ಪತ್ರಿಕೆಗಳ ಛಾಯಾಗ್ರಾಹಕರಿಗೆ ವಿಧಿಸಿರುವ ನಿರ್ಬಂಧದ ಬಗ್ಗೆಯೂ ಮಾಧ್ಯಮ ಸಂಸ್ಥೆಗಳಿಂದ ವ್ಯಾಪಕ ವಿರೋಧ ವ್ಯಕ್ತವಾಗಿದ್ದರೂ ಆ ನಿರ್ಧಾರ ವಾಪಸ್ ಪಡೆದಿಲ್ಲ.